O.S. 239/2018 PW-1

ದಿನಾಂಕಃ 07.04.2026 ರಂದು ಸಾಕ್ಷಿಗೆ ಪ್ರಮಾಣ ವಚನ ಭೋಧಿಸಲಾಯಿತು.

**ಪಾಟೀ ಸವಾಲುಃ ಪ್ರತಿವಾದಿ ಪರ ವಕೀಲರಿಂದಃ**

ನಾನು ವಿದ್ಯಾಭ್ಯಾಸ ಮಾಡಿರುವುದಿಲ್ಲ. ನಮ್ಮ ತಾತನ ಹೆಸರು ಕರಿಯಣ್ಣ ಎಂದರೆ ಸರಿ. ಅವರ ಹೆಸರಿನಲ್ಲಿ 3 ಎಕರೆ ಜಮೀನು ಇರುತ್ತದೆ. ದಾವಾ ಸ್ವತ್ತು 3-7 ಗುಂಟೆ ವಿಸ್ತೀರ್ಣವಿದೆ. ದಾವಾ ಸ್ವತ್ತು ಮತ್ತು ಸರ್ವೆ ನಂ.112/3 ಅಕ್ಕ-ಪಕ್ಕದಲ್ಲಿದೆ ಎಂದರೆ ನನಗೆ ಗೊತ್ತಿಲ್ಲ. ದಾವಾ ಸ್ವತ್ತು ಮೂಲತಃ ನಮ್ಮ ತಾತ ಕರಿಯಣ್ಣರವರಿಗೆ ಸೇರಿದೆ ಎಂದರೆ ಸರಿ. ಸರ್ವೆ ನಂ.112/3 ಗಂಗಣ್ಣ ಬಿನ್ ಬಸಪ್ಪ ರವರಿಗೆ ಸೇರಿದೆ ಎಂದರೆ ನನಗೆ ಗೊತ್ತಿಲ್ಲ. ಸರ್ವೆ ನಂ.112/2 ಮತ್ತು 112/3 ರಲ್ಲಿ ಮಧುಗಿರಿ ಉಪವಿಭಾಗಾಧಿಕಾರಿಗಳು ತಲಾ 20 ಗುಂಟೆ ಜಮೀನು ಸ್ವಾಧೀನ ಪಡೆಸಿಕೊಂಡಿದ್ದರು ಎಂದರೆ ನನಗೆ ಗೊತ್ತಿಲ್ಲ. ಆ ಸಂಬಂಧ ನಮ್ಮ ತಾತರವರು ಪರಿಹಾರ ಹಣ ಪಡೆದಿದ್ದರು ಎಂದು ನನಗೆ ಗೊತ್ತಿಲ್ಲ.

ದಿಃ 13-02-1950 ರಲ್ಲಿ ನಮ್ಮ ತಾತರವರು ಸರ್ಕಾರಕ್ಕೆ ಕ್ರಯಪತ್ರ ಬರೆದುಕೊಟ್ಟರು ಎಂದು ನನಗೆ ಗೊತ್ತಿಲ್ಲ ಅದರಂತೆ ಸರ್ಕಾರದವರು 20 ಗುಂಟೆ ಜಮೀನನ್ನು ಸ್ವಾಧೀನಕ್ಕೆ ಪಡೆದರು ಎಂದು ನನಗೆ ಗೊತ್ತಿಲ್ಲ. ದಾವಾ ಸ್ವತ್ತಿಗೆ ಸಂಬಂಧಿಸಿದ ಪಹಣಿಗಳನ್ನು , ಆರ್.ಆರ್ 5 ಮತ್ತು 6 ಅನ್ನು ನಾನು ನೋಡಿಲ್ಲ. ನಮ್ಮ ತಂದೆಯವರಿಗೆ 6 ಜನ ಮಕ್ಕಳು. ಅವರನ್ನು ದಾವೆಯಲ್ಲಿ ಪಕ್ಷಕಾರರನ್ನಾಗಿ ಸೇರಿಸಿಲ್ಲ ಎಂದರೆ ಸರಿ. ಸರ್ಕಾರ ವಶಪಡಿಸಿಕೊಂಡ ಜಮೀನಲ್ಲಿ ಉಚಿತ ನಿವೇಶನ ಹಂಚಿಕೆ ಮಾಡಿದರು ಎಂದರೆ ಸರಿಯಲ್ಲ. ಅದರಂತೆ ಫಲಾನುಭವಿಗಳ ಹೆಸರಿಗೆ ಖಾತೆಯಾಗಿತ್ತು ಎಂದರೆ ಸರಿಯಲ್ಲ. ಫಲಾನುಭವಿಗಳು ಮನೆಯನ್ನು ಕಟ್ಟಿಕೊಂಡು ವಾಸವಿದ್ದಾರೆ ಎಂದರೆ ಸರಿಯಲ್ಲ. ನಾನು ದಾವಾ ಸ್ವತ್ತಿಗೆ ಸಂಬಂಧಿಸಿದಂತೆ O.S No.125/2006 ರಂತೆ ದಾವೆ ಸಲ್ಲಿಸಿದ್ದೆ ಎಂದರೆ ಸರಿ. ಸದರಿ ಪ್ರಕರಣದಲ್ಲಿ 1ನೇ ಪ್ರತಿವಾದಿಯ ಗಂಡನನ್ನು ಪಕ್ಷಕಾರರನ್ನಾಗಿ ಮಾಡಿದ್ದೆ ಎಂದರೆ ಸರಿ. ಸದರಿ ದಾವೆ ವಜಾ ಆಗಿದೆ ಎಂದರೆ ಸರಿಯಲ್ಲ. ಸದರಿ ದಾವೆಯ ವಿರುದ್ಧ R.A.No.158/2011 ರಂತೆ ಮೇಲ್ಮನವಿ ಸಲ್ಲಿಸಿದ್ದೆ ಎಂದರೆ ಸರಿ. ಸದರಿ ಮೇಲ್ಮನವಿ ವಜಾಆಗಿದೆ ಎಂದರೆ ಸರಿಯಲ್ಲ. ವಜಾ ಆಗಿದ್ದರು ಸಹ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಕಂದಾಯ ಅಧಿಕಾರಿಗಳ ದುರುಪಯೋಗಪಡಿಸಿಕೊಂಡು ನಮ್ಮ ಹೆಸರಿಗೆ ಖಾತೆ ಮಾಡಿಸಿಕೊಂಡಿದ್ದೇನೆ ಎಂದರೆ ಸರಿಯಲ್ಲ. ಸದರಿ ಕಂದಾಯ ದಾಖಲೆಗಳ ವಿರುದ್ಧ ಪ್ರತಿವಾದಿಗಳು ಅಪೀಲು ಸಲ್ಲಿಸಿದ್ದರು ಎಂದರೆ ಸರಿ. ಸರ್ಕಾರ ವಶಪಡಿಸಿಕೊಂಡ 20 ಗುಂಟೆ ಜಮೀನಿನಲ್ಲಿ ನಮಗೆ ಯಾವುದೇ ಹಕ್ಕು ಇಲ್ಲ ಎಂದರೆ ಸರಿಯಲ್ಲ. 1ನೇ ಪ್ರತಿವಾದಿಯ ಗಂಡನ ಹೆಸರಿಗೆ ಪಂಚಾಯತಿಯವರು ನೀಡಿದ ಜಾಗಕ್ಕೆ ಸಂಬಂಧಿಸಿದಂತೆ ಖಾತೆಯಾಗಿದೆ ಎಂದರೆ ಸರಿಯಲ್ಲ. ಸರ್ಕಾರಿ ವಶಪಡಿಸಿಕೊಂಡ 20 ಗುಂಟೆ ಜಮೀನನ್ನು ಸೇರಿಸಿಕೊಂಡು ದಾವೆಯನ್ನು ಸಲ್ಲಿಸಿದ್ದೇನೆ ಎಂದರೆ ಸರಿ. ದಾವಾ ಸ್ವತ್ತಿನಲ್ಲಿ ನಮಗೆ ಯಾವುದೇ ಹಕ್ಕು ಇಲ್ಲ ಎಂದರೆ ಸರಿಯಲ್ಲ. ಎಲ್ಲಾ ವಿಚಾರ ಗೊತ್ತಿದ್ದರು ಸಹ ನೀವು ಸುಳ್ಳು ದಾಖಲೆಗಳನ್ನು ಸೃಷ್ಟಿಸಿ, ಸುಳ್ಳು ದಾವೆ ಹೂಡಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಕಂಪ್ಯೂಟರೀಕರಣಗೊಳಿಸಿ ಪ್ರಿಂಟ್ ತೆಗೆಯಲಾಯಿತು.)

ಓ.ಹೇ.ಕೇ.ಸರಿ.ಇದೆ.

ಸಹಿ/-

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ.,
ಶಿರಾ.